ದೂರವಾಣಿ : 080 - 22263479

ಬೆಂ.ಮ.ಪ್ರ.ಪ್ರಾ.

# ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ನಂ. 1, ಆಲಿ ಆಸ್ಕರ್ ರಸ್ತೆ, ಬೆಂಗಳೂರು – 560 052.

ಸಂಖ್ಯೆ: **STRRPA/TP/DP-07/2024-25**

ದಿನಾಂಕ: 03 .01.2025.

**ಪ್ರಾರಂಭಿಕ ಪ್ರಮಾಣ ಪತ್ರ**

**ನಮೂನೆ- III**

**ನಿಯಮ – ೩೬**

**ವಿಷಯ:** ಹೊಸಕೋಟೆ ತಾಲ್ಲೂಕು, ಅನುಗೊಂಡನಹಳ್ಳಿ ಹೋಬಳಿ, ಸಮೇತನಹಳ್ಳಿ ಗ್ರಾಮದ ಸ.ನಂ.5ರಲ್ಲಿ 4ಎಕರೆ–39ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1) ಅರ್ಜಿದಾರರಾದ ಮೆ॥ ಇಷ್ಟಿಕ ವೈಬ್ರೇನಿಯಮ್ ಡೆವಲಪರ್ಸ್ ಎಲ್‌ಎಲ್‌ಪಿ ಇವರ ಅರ್ಜಿ ದಿನಾಂಕ:20.08.2024
2) ದಿನಾಂಕ: 12.09.2024ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 36ನೇ ಸಭೆಯ ವಿಷಯ ಸಂಖ್ಯೆ: 36.7.6ರ ನಡವಳಿಕೆ
3) ಶುಲ್ಕ ಪಾವತಿ ರಸೀದಿ ಸಂಖ್ಯೆ: 5300 ಮತ್ತು 5301, ದಿನಾಂಕ: 04.11.2024.
4) ಉದ್ಯಾನವನ ಮತ್ತು ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್‌ಗಾಗಿ ಕಾಯ್ದಿರಿಸಿದ ಜಾಗಗಳ ಪರಿತ್ಯಜನಾ ಪತ್ರ ದಿನಾಂಕ: 30.12.2024.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿನ ಅರ್ಜಿಯಲ್ಲಿ ಹೊಸಕೋಟೆ ತಾಲ್ಲೂಕು, ಅನುಗೊಂಡನಹಳ್ಳಿ ಹೋಬಳಿ, ಸಮೇತನಹಳ್ಳಿ ಗ್ರಾಮದ ಸ.ನಂ.5ರಲ್ಲಿ 4ಎಕರೆ–39ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ಕೋರಲಾಗಿತ್ತು. ಉಲ್ಲೇಖ (2)ರಲ್ಲಿನ ದಿನಾಂಕ: 12.09.2024ರಂದು ನಡೆದ ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರದ 36ನೇ ಸಭೆಯ ವಿಷಯ ಸಂಖ್ಯೆ: 36.7.6ರ ನಡವಳಿಕೆಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದಿಸಲು ತೀರ್ಮಾನಿಸಲಾಗಿತ್ತು. ಅರ್ಜಿದಾರರು ಉಲ್ಲೇಖ (3)ರಲ್ಲಿ ನಿಗಧಿತ ಶುಲ್ಕವನ್ನು ಉಪನಗರ ವರ್ತುಲ ರಸ್ತೆ (STRR) ಯೋಜನಾ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

ಉಲ್ಲೇಖ (4)ರಲ್ಲಿನ ನೋಂದಾಯಿತ ಪರಿತ್ಯಜನಾ ಪತ್ರದ ರೀತ್ಯ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯಲ್ಲಿನ ಉದ್ಯಾನವನ ಮತ್ತು ಉಪನಗರ ವರ್ತುಲ ರಸ್ತೆ ಭೂಬ್ಯಾಂಕ್‌ಗಾಗಿ ಕಾಯ್ದಿರಿಸಿದ ಪ್ರದೇಶಗಳನ್ನು ಈ ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ಹಸ್ತಾಂತರಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಹೊಸಕೋಟೆ ತಾಲ್ಲೂಕು, ಅನುಗೊಂಡನಹಳ್ಳಿ ಹೋಬಳಿ, ಸಮೇತನಹಳ್ಳಿ ಗ್ರಾಮದ ಸ.ನಂ.5ರಲ್ಲಿ 4ಎಕರೆ–39ಗುಂಟೆ ವಿಸ್ತೀರ್ಣ ಪ್ರದೇಶದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದಿಸಲಾಗಿದೆ.

**ಷರತ್ತುಗಳು**

1) ಪ್ರಾಧಿಕಾರಕ್ಕೆ ಸಂಬಂಧಪಟ್ಟ ಶುಲ್ಕಗಳನ್ನು ಪಾವತಿಸುವುದು.

..2..

2) ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಪೂರೈಕೆ ಬಗ್ಗೆ ಅರ್ಜಿದಾರರು ಖಾತ್ರಿಪಡಿಸುವುದು.

3) ಈ ಅಭಿವೃದ್ಧಿ ನಕ್ಷೆಯನ್ನು ಜಿಲ್ಲಾಧಿಕಾರಗಳ ಪಥ ಬದಲಾವಣೆ ಆದೇಶ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರು ಸಲ್ಲಿಸಿರುವ ಸರ್ವೆ ನಕ್ಷೆಯ ಆಧಾರದ ಮೇಲೆ ಅರ್ಜಿದಾರರು ತಯಾರಿಸಿ ಸಲ್ಲಿಸಿದ್ದು, ಸ.ನಂ.ಗಳ ವಿಸ್ತೀರ್ಣದಲ್ಲಿ ವ್ಯತ್ಯಾಸವಿದ್ದಲ್ಲಿ, ಅರ್ಜಿದಾರರೇ ಸಂಪೂರ್ಣ ಜವಬ್ದಾರರಾಗಿರುತ್ತಾರೆ.

4) ಅಭಿವೃದ್ಧಿ ಯೋಜನಾ ನಕ್ಷೆಗೆ ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ಅನುಮೋದನೆ ನೀಡಿರುವುದರಿಂದ ಮುಂದಿನ ದಿನಗಳಲ್ಲಿ ಸದರಿ ಜಮೀನುಗಳ ಮಾಲೀಕತ್ವಕ್ಕೆ ಸಂಬಂಧಿಸಿದಂತೆ ತಂಟೆ ತಕರಾರು ಅಥವಾ ಸಿವಿಲ್ ವ್ಯಾಜ್ಯಗಳು ಉದ್ಭವವಾದ್ದಲ್ಲಿ ಬಡಾವಣೆ ಮಾಲೀಕರೇ ಹೊಣೆಗಾರರಾಗಿರುತ್ತಾರೆ.

5) ಅಭಿವೃದ್ಧಿ ಯೋಜನೆಯಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು.

6) ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ.

7) ಉದ್ಯಾನವನ ಮತ್ತು ಬಯಲು ಜಾಗಗಳನ್ನು ಹಾಗೂ ಸಿ.ಎ. ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಅಭಿವೃದ್ಧಿಪಡಿಸುವುದು.

8) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು.

9) ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರದ ಪರಿಶೀಲಿಸಿಕೊಳ್ಳತಕ್ಕದ್ದು.

10) ವಿವರವಾದ ಕಟ್ಟಡ ನಕ್ಷೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 15ರ ಅಡಿಯಲ್ಲಿ ಯೋಜನಾ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು.

11) ವಲಯ ನಿಯಮಾವಳಿಗಳ ನಿಯಮ 17.3.1 (d) ರಂತೆ ಈ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಉದ್ದೇಶಿತ ಕಟ್ಟಡಗಳ ಬ್ಲಾಕ್‌ಗಳು, ಉಪಗಮನ ರಸ್ತೆ, ಹೈವೇಗಳು, ಉದ್ಯಾನವನ ಮತ್ತು ಖಾಲಿ ಜಾಗಗಳು, ನಾಗರೀಕ ಸೌಕರ್ಯ ಜಾಗಗಳನ್ನು ನಿಗದಿಪಡಿಸಿರುವ ನಕ್ಷೆಯಾಗಿದ್ದು ಎಲ್ಲಾ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಕಟ್ಟಡ ನಕ್ಷೆ ಅನುಮೋದಿಸುವ ಸಂದರ್ಭದಲ್ಲಿ ಸಲ್ಲಿಸತಕ್ಕದ್ದು.

12) ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಪೂರ್ವದಲ್ಲಿ ಅಗತ್ಯ ಅಭಿವೃದ್ಧಿ ಶುಲ್ಕವನ್ನು ಯೋಜನಾ ಪ್ರಾಧಿಕಾರಕ್ಕೆ/ಸ್ಥಳೀಯ ಸಂಸ್ಥೆಗೆ ಪಾವತಿಸತಕ್ಕದ್ದು.

13) ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆಯುಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು, ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು.

14) ಅಗ್ನಿಶಾಮಕ ಇಲಾಖೆ, ವೈಮಾನಿಕ ಇಲಾಖೆ, ಸ್ಥಳೀಯ ಸಂಸ್ಥೆ, ಬೆಸ್ಕಾಂ ಹಾಗೂ ಕೆ.ಎಸ್.ಪಿ.ಸಿ.ಬಿ. ಮಂಡಳಿ/ ಇಲಾಖೆಗಳ ನಿರಾಕ್ಷೇಪಣಾ ಪತ್ರಗಳನ್ನು ಯೋಜನಾ ಪ್ರಾಧಿಕಾರವು ಪಡೆದು ಕಟ್ಟಡ ನಕ್ಷೆ ಮಂಜೂರಾತಿ ನೀಡುವುದು.

15) ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರಿ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

16) ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ/ದಾಖಲಾತಿ ನೀಡಿದ್ದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ.

17) ಅಭಿವೃದ್ಧಿ ಯೋಜನೆಯಲ್ಲಿನ ಘನತ್ಯಾಜ್ಯಗಳನ್ನು ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

..3..

18) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31.03.2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹೀರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಪಡೆದುಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

19) ಉಪನಗರ ವರ್ತುಲ ರಸ್ತೆ ಯೋಜನಾ ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು.

20) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of Water (Prevention & Control of Pollution) Act, 1974ರ ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮ ಕೈಗೊಳ್ಳಲು ಸೂಚಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

   i. ಮಳೆ ನೀರು ಗಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು.

   ii. ಮಳೆ ನೀರು ಗಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು.

   iii. ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ಮಳೆ ನೀರು ಗಾಲುವೆಗಳ ಅಳತೆಗಳನ್ನು ಅತಿಕ್ರಮ/ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಯಲು ಬೇಕಾದ ಕ್ರಮವಹಿಸುವುದು.

   iv. ಮಳೆ ನೀರು ಗಾಲುವೆಗಳು ತೆರೆದ ಸ್ಥಿತಿಯಲ್ಲಿ ಸ್ವಚ್ಛವಾಗಿರುವಂತೆ ಕ್ರಮವಹಿಸುವುದು.

21) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಅನುಮೋದಿತ ವಿನ್ಯಾಸ/ಬಡಾವಣೆಯನ್ನು ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳತಕ್ಕದ್ದು ಹಾಗೂ ನೋಂದಣಿ ಮಾಡಿಕೊಂಡ ನಂತರವೇ ಅನುಮೋದಿತ ವಿನ್ಯಾಸ/ಬಡಾವಣೆಯ ನಿರ್ಮಾಣದ ಕುರಿತು ಜಾಹೀರಾತು ನೀಡತಕ್ಕದ್ದು.

22) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

03/01/25

**ಸದಸ್ಯ ಕಾರ್ಯದರ್ಶಿಗಳು(ಅ.ಪ್ರ)**
ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು,
ಉಪನಗರ ವರ್ತುಲ ರಸ್ತೆ (STRR) ಯೋಜನಾ
ಪ್ರಾಧಿಕಾರ, ಬೆಂಗಳೂರು.

**ಇವರಿಗೆ,**
ಮೆ॥ ಇಷ್ಟಿಕ ವೈಬ್ರೇನಿಯಮ್ ಡೆವಲಪರ್ಸ್ ಎಲ್‌ಎಲ್‌ಪಿ,
ಇದರ ಪ್ರತಿನಿಧಿಗಳಾದ ಶ್ರೀ ಗೌನಿ ಚಿರಂಜೀವಿ ರೆಡ್ಡಿ
ಮತ್ತು ಶ್ರೀ ಪವನ್ ಸಿ. ರೆಡ್ಡಿ,
ನಂ. 937, ಎಸ್ .ಎನ್.ಆರ್ಕೇಡ್, 3ನೇ ಮಹಡಿ,
21ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಜೆ.ಪಿ. ನಗರ,
ಬೆಂಗಳೂರು-560 078.